**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

ದಿನಾಂಕಃ 16ನೇ ಜುಲೈ ತಿಂಗಳು 2025ರಂದು

**ಸಿಸಿ ನಂ.264/2023**

| | |
|---|---|
| **ಫಿರ್ಯಾದುದಾರಃ** | ಶ್ರೀ. ಯಾಕೋಬಾ ಬಿನ್ ವೆಂಕಟೇಶ,<br>ವಯಸ್ಸು ಸುಮಾರು 26ವರ್ಷ,<br>ವಾಸಃ ಶಂಕರಪುರ ಗ್ರಾಮ, ಹನಗೋಡು<br>ಹೋಬಳಿ, ಹುಣಸೂರು ತಾಲ್ಲೂಕು,<br>ಮೈಸೂರು ಜಿಲ್ಲೆ. |
| | **– ವಿರುದ್ಧ –** |
| **ಆರೋಪಿಃ** | ಶ್ರೀಮತಿ. ಅನುವತಿ.ಎಸ್. ಕೋಂ ಜಗದ್ಬಾಬು @ ಲಾಲು,<br>ವಯಸ್ಸು ಸುಮಾರು 23ವರ್ಷ, ವಾಸಃ ಅನಾಲ್ ಬೋರೆ,<br>ಹೊಸ ಬಡಾವಣೆ, ಶಿಕಾರಿಪುರ ಗ್ರಾಮ,<br>ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ. |

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 251 ರ ಅಡಿಯಲ್ಲಿ ಆರೋಪಣಾ ಸಾರಾಂಶ**

ಆರೋಪಿಯಾದ ನೀವು ಮತ್ತು ಫಿರ್ಯಾದುದಾರರಾದ ಯಾಕೋಬಾ ರವರು ತುಂಬಾ ವರ್ಷಗಳಿಂದ ಪರಿಚಯಸ್ಥರಾಗಿದ್ದು, ಸದರಿ ಪರಿಚಯದ ಆಧಾರದ ಮೇಲೆ ನೀವು ದಿನಾಂಕಃ 10.01.2023 ರಂದು ಫಿರ್ಯಾದುದಾರರನ್ನು ಭೇಟಿಯಾಗಿ ನಿಮ್ಮ ಹಳೆಯ ಮನೆಯ ವೆಚ್ಚಗಳಿಗೆ ಆರ್ಥಿಕ ನೆರವು ಮತ್ತು ಕಾನೂನು ಅವಶ್ಯಕತೆಗಾಗಿ ಅವರಿಂದ ರೂ.2,50,000/-ಗಳನ್ನು ಮೂರು ತಿಂಗಳ ಒಳಗೆ ತೀರಿಸುವುದಾಗಿ ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ತೀರುವಳಿಗಾಗಿ ದಿನಾಂಕಃ 12.04.2023 ರಂದು ಪಾವತಿಯಾಗುವಂತೆ ಸ್ಟೇಟ್ ಬ್ಯಾಂಕ್ ಇಂಡಿಯಾ, ನಾಗಮಂಗಲ ಶಾಖೆಯ ಚೆಕ್ ಸಂಖ್ಯೆ 696355 ಅನ್ನು ರೂ.2,50,000/-ಗಳಿಗೆ

ನೀಡಿದ್ದು, ಅದನ್ನು ಫಿರ್ಯಾದಿದಾರರು ತಮ್ಮ ಖಾತೆ ಹೊಂದಿರುವ ಆಕ್ಸಿಸ್ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" ಎಂಬ ಕಾರಣಕ್ಕಾಗಿ ಸದರಿ ಚೆಕ್ ದಿನಾಂಕ 15.04.2023 ರ ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿದ್ದು, ಈ ಬಗ್ಗೆ ಫಿರ್ಯಾದುದಾರರು ದಿನಾಂಕ 28.04.2023 ರಂದು ತಮ್ಮ ವಕೀಲರ ಮೂಲಕ ನೋಂದಾಯಿತ ಅಂಚೆಯಲ್ಲಿ ನಿಮ್ಮ ವಿಳಾಸಕ್ಕೆ ನೋಟೀಸು ನೀಡಿದ್ದು, ಸದರಿ ನೋಟೀಸು ನಿಮಗೆ ದಿನಾಂಕಃ 11.05.2023 ರಂದು ಖುದ್ದಾಗಿ ಜಾರಿಯಾಗಿದ್ದರೂ ಸಹ ನೀವು ಚೆಕ್ ನಲ್ಲಿ ನಮೂದಿಸಿದ ಹಣವನ್ನಾಗಲೀ ನೋಟೀಸಿಗೆ ಉತ್ತರವನ್ನಾಗಲೀ ನೀಡದೆ ಇರುವುದರಿಂದ ನೀವು ನೆಗೋಷಿಯೇಬಲ್ ಇನ್ ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ 138ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆಃ1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆಃ 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

ANITHA

Digitally signed by ANITHA
Date: 2025.07.16 16:57:41 +0530

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ